ಬ್ಯಾಂಕ್‌ನಿಂದ ಪಡೆಯಲಿಲ್ಲ. ಆದುದರಿಂದ ಸಂಪೂರ್ಣವಾಗಿ ಅವುಗಳನ್ನು ಅಧ್ಯರ್ಪಿಸಲಾಯಿತು.

ಈ) ಕರ್ನಾಟಕ ಆರ್ಥಿಕ ಹೊಣೆಗಾರಿಕೆ ಅಧಿನಿಯಮದನ್ವಯ ಆರ್ಥಿಕ ನೀತಿಯ ಅವಕಾಶಗಳನ್ನು ಸಂಪೂರ್ಣವಾಗಿ ಉಪಯೋಗಿಸಿಕೊಳ್ಳಲಾಗಿದೆ.

ಪ್ರವಾಸೋದ್ಯಮ ಸ್ಥಳಗಳ ಅಭಿವೃದ್ಧಿ

67 (194) ಶ್ರೀ ಶಿವಲಿಂಗೇಗೌಡ ಕೆ.ಎಂ (ಅರಸೀಕೆರೆ):– ಮಾನ್ಯ ಪ್ರವಾಸೋದ್ಯಮ, ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಅರಸೀಕೆರೆ ಕ್ಷೇತ್ರದಲ್ಲಿ ಪ್ರವಾಸೋದ್ಯಮ ಇಲಾಖಾ ವ್ಯಾಪ್ತಿಗೆ ಸೇರಿರುವ ಸ್ಥಳಗಳ ಸಂಖ್ಯೆ ಎಷ್ಟು; ಹೆಸರು ಸಹಿತ ಮಾಹಿತಿ ನೀಡುವುದು;

ಆ) ಈ ಸ್ಥಳಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು;

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ, ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು):

ಅ) ಅರಸೀಕೆರೆ ಕ್ಷೇತ್ರದಲ್ಲಿ ಪ್ರವಾಸೋದ್ಯಮ ಇಲಾಖೆಯು 9 ಸ್ಥಳಗಳನ್ನು ಪ್ರವಾಸಿ ಸ್ಥಳಗಳೆಂದು ಗುರುತಿಸಲಾಗಿದೆ.

1. ಅರಸೀಕೆರೆ ಶಿವಾಲಯ ಹಾಗೂ ಮಾಲೆಕಲ್ ತಿರುಪತಿ.
2. ಹಾರನಹಳ್ಳಿ.
3. ಗರುಡನಗಿರಿ.
4. ಬಾಣಾವರ.
5. ಅರಕೆರೆ.
6. ಹುಲ್ಲೇಕೆರೆ.
7. ಬೆಟ್ಟದಪುರ.
8. ಜೇನುಕಲ್ಲು ಸಿದ್ದೇಶ್ವರ ಸ್ವಾಮಿ.
9. ಕೋಡಿಮಠ.

ಆ) ಪ್ರವಾಸೋದ್ಯಮ ಇಲಾಖೆಯಿಂದ ಈ ಕೆಳಗಿನ ಸ್ಥಳಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಲಾಗಿದೆ.

1. ಮಾಲೇಕಲ್ ತಿರುಪತಿ.
2. ಹಾರನಹಳ್ಳಿ.
3. ಕೋಡಿಮಠ.

ಈ ಸ್ಥಳಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಬೆಟ್ಟದಪುರದಲ್ಲಿ ಪ್ರವಾಸಿಗರಿಗಾಗಿ ಶೌಚಾಲಯ ಹಾಗೂ ಎರಡು ಕೊಠಡಿಗಳನ್ನು ನಿರ್ಮಿಸಲಾಗಿದೆ.

ರಾಜ್ಯ ಸರ್ಕಾರಿ ನೌಕರರಿಗೆ ನಿವೇಶನ ನೀಡುವುದು

69 (180) ಶ್ರೀ ವಿಶ್ವನಾಥ್ ಎಸ್.ಆರ್ (ಯಲಹಂಕ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಯಲಹಂಕ ವಿಧಾಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರು ಎಲ್ಲಾ ಸರ್ಕಾರಿ 'ಸಿ' ಗುಂಪಿನ ಹಾಗೂ 'ಡಿ' ಗುಂಪಿನ ನೌಕರರು ಹಾಗೂ ಶಿಕ್ಷಣ ಇಲಾಖೆಗಳ ಭೋದಕ ಸಿಬ್ಬಂದಿಗಳಿಗೆ ರಿಯಾಯಿತಿ ದರದಲ್ಲಿ ನಿವೇಶನಗಳನ್ನು ನಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಅನುಷ್ಠಾನಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಶ್ರೀ ಬಿ.ಎಸ್. ಯಡಿಯೂರಪ್ಪ(ಮುಖ್ಯ ಮಂತ್ರಿಗಳು):

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಈ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಹೆಚ್ಚುವರಿ ಕುಡಿಯುವ ನೀರು ಸರಬರಾಜು ಮಾಡುವುದು

70 (181) ಶ್ರೀ ವಿಶ್ವನಾಥ್.ಎಸ್.ಆರ್.(ಯಲಹಂಕ):– ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಯಲಹಂಕ ಮತಕ್ಷೇತ್ರದ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಹಲವಾರು ಬಹುಮಹಡಿ ವಸತಿ ಸಂಕೀರ್ಣಗಳು ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಶೀಘ್ರವಾಗಿ ಬೆಳೆಯುತ್ತಿರುವ ಯಲಹಂಕಗೆ ಪ್ರಸ್ತುತ ಸರಬರಾಜು ಮಾಡುತ್ತಿರುವ ಕುಡಿಯುವ ನೀರು ಸಾಕಾಗದೇ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ಅವಶ್ಯಕತೆಗೆ ತಕ್ಕಂತೆ ಕುಡಿಯುವ ನೀರನ್ನು ಸರಬರಾಜು ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ;